ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2019-20

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ: 13-08-2019

## ಸುತ್ತೋಲೆ

**ವಿಷಯ:** ಆಗಸ್ಟ್ 20 ರಂದು ಸದ್ಭಾವನಾ ದಿನಾಚರಣೆಯನ್ನು ಆಚರಿಸುವ ಬಗ್ಗೆ

**ಉಲ್ಲೇಖ:** 1) ರಾಜ್ಯ ಎನ್ ಎಸ್ ಎಸ್ ಅಧಿಕಾರಿಯವರ ಪತ್ರ ಸಂಖ್ಯೆ: ಯುಸೇಇ/ರಾಸೇಯೋ /132019-2/213 ದಿನಾಂಕ: 25.07.2019

2), ಸರ್ಕಾರದ ಅಧೀನ ಕಾರ್ಯದರ್ಶಿ ಯವರ ಪತ್ರ ಸಂಖ್ಯೆ: ಸಿಆಸುಇ01 ರಾಐಸ 2019 ದಿನಾಂಕ: 26-07-2019

*****

ಮೇಲಿನ ವಿಷಯ ಹಾಗೂ ಉಲ್ಲೇಖಿತ ಪತ್ರಕ್ಕನುಸಾರ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯೇಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ 20ನೇ ಆಗಸ್ಟ್ ರಂದು ಸದ್ಭಾವನಾ ದಿನವನ್ನಾಗಿ ಆಚರಿಸಲಾಗುತ್ತಿದೆ. ದಿನಾಂಕ 20.08.2018 ರಂದು ಸದ್ಭಾವನಾ ಪ್ರತಿಜ್ಞೆಯನ್ನು ಸ್ವೀಕರಿಸಿ, ಯುವಕರಲ್ಲಿ ರಾಷ್ಟ್ರೀಯ ಐಕ್ಯತೆ ಮತ್ತು ಕೋಮು ಸೌಹಾರ್ದವನ್ನು ಮೂಡಿಸುವುದು ಇದರ ಆಶಯವಾಗಿದೆ.

ಸದರಿ ದಿನದಂದು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿರುವ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಸದ್ಭಾವನಾ ದಿನವನ್ನು ಆಚರಿಸಲು ಸೂಚಿಸಲಾಗಿದೆ, ಸದ್ಭಾವನಾ ಪ್ರತಿಜ್ಞೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಕಾರ್ಯಕ್ರಮವನ್ನು ನಡೆಸಿದ ಬಗ್ಗೆ ಒಂದು ವರದಿಯನ್ನು ನಿರ್ದೇಶನಾಲಯದ ರಾಷ್ಟ್ರೀಯ ಸೇವಾ ಯೋಜನೆ ಕೋಶದ ಮಿಂಚಂಚೆ ವಿಳಾಸ nssdte@gmail.com ಗೆ ಕಳುಹಿಸಲು ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ನಿರ್ದೇಶಕರು

ಪ್ರತಿ:-

1. ರಾಜ್ಯದ ಎಲ್ಲಾ ಸರ್ಕಾರಿ /ಅನುದಾನಿತ/ಖಾಸಗಿ, ಇಂಜನಿಯರಿಂಗ್ ಕಾಲೇಜು ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ -ಸೂಕ್ತ ಕ್ರಮಕ್ಕಾಗಿ
2. ಸರ್ಕಾರದ ಅಧೀನ ಕಾರ್ಯದರ್ಶಿ ಸಿಆಸುಇ ರಾಜಕೀಯ – ಇವರ ಮಾಹಿತಿಗಾಗಿ
3. ರಾಜ್ಯ ಎನ್.ಎಸ್.ಎಸ್ ಅಧಿಕಾರಿಗಳು, ರಾಜ್ಯ ಎನ್ ಎಸ್ ಎಸ್ ಕೋಶ, ಬೆಂಗಳೂರು ,
4. ಇ-ಆಡಳಿತ ವಿಭಾಗಕ್ಕೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು
5. ಕಛೇರಿ ಪ್ರತಿ

# ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಭೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.